ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1167

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವ ದಿನಾಂಕ : 23-09-2022

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರೈತರ ಕೃಷಿ ಯಂತ್ರೋಪಕರಣ ಬಳಸುವ ಯಂತ್ರವನ್ನು ಪ್ರೋತ್ಸಾಹಿಸಲು ಇಂಧನ ವೆಚ್ಚ ಕಡಿಮೆ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;	ಮಾನ್ಯ ಮುಖ್ಯಮಂತ್ರಿಯವರು 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ "ರಾಜ್ಯದಲ್ಲಿ ಕೃಷಿ ಉತ್ಪಾದಕತೆಯನ್ನು ಹೆಚ್ಚಿಸುವಲ್ಲಿ ರೈತರಿಗೆ ಕೃಷಿ ಯಂತ್ರೋಪಕರಣದ ಪಾತ್ರ ಬಹುಮುಖ್ಯವಾಗಿದೆ. ರೈತರಿಗೆ ಕೃಷಿ ಯಂತ್ರೋಪಕರಣಗಳ ಬಳಕೆಯನ್ನು ಪ್ರೋತ್ಸಾಹಿಸಲು ಹಾಗೂ ಇಂಧನ ವೆಚ್ಚದ ಭಾರವನ್ನು ಕಡಿಮೆ ಮಾಡಲು ರಾಜ್ಯದಲ್ಲಿಯೇ ಮೊಟ್ಟ ಮೊದಲ ಬಾರಿಗೆ ಪ್ರತಿ ಎಕರೆಗೆ 250/- ರೂ.ಗಳಂತೆ ಗರಿಷ್ಟ ಐದು ಎಕರೆಗೆ ಡಿ.ಬಿ.ಟಿ ಮೂಲಕ ಡೀಸೆಲ್‌ಗೆ ಸಹಾಯಧನವನ್ನು ನೀಡಲು "ರೈತ ಶಕ್ತಿ" ಎಂಬ ಹೊಸ ಯೋಜನೆಗೆ 500 ಕೋಟಿ ರೂ.ಗಳನ್ನು ಒದಗಿಸಲಾಗುವುದು". ಎಂಬುದಾಗಿ ಘೋಷಣೆ ಮಾಡಿದಂತೆ, ಯೋಜನೆಯ ಅನುಷ್ಠಾನಕ್ಕಾಗಿ ಸರ್ಕಾರಿ ಆದೇಶ ಹೊರಡಿಸಲಾಗಿರುತ್ತದೆ.
ಆ)	ಎಕರೆಗೆ ರೂ.250/- ರಂತೆ ರೈತ ಶಕ್ತಿ ಎಂಬ ಯೋಜನೆಯನ್ನು ಸರ್ಕಾರ ಅನುಷ್ಠಾನಗೊಳಿಸಲಾಗಿದೆಯೇ;	ರೈತ ಶಕ್ತಿ ಯೋಜನೆಯನ್ನು ಅನುಷ್ಠಾನ ಮಾಡಲು ಸರ್ಕಾರದ ಆದೇಶ ಸಂಖ್ಯೆ AGRI-AML/109/2022 ದಿನಾಂಕ:17-05-2022ರಲ್ಲಿ ಅನುಮೋದನೆ ನೀಡಲಾಗಿದೆ. ಈ ಯೋಜನೆಯನ್ನು ಅನುಷ್ಠಾನ ಮಾಡಲು FRUITS ತಂತ್ರಾಂಶದಲ್ಲಿರುವ ಮಾಹಿತಿಯನ್ನು K-kisan ತಂತ್ರಾಂಶಕ್ಕೆ ವರ್ಗಾಯಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ.
ಇ)	ಈ ಯೋಜನೆಯ ಉಪಯೋಗ ಪಡೆಯಲು ರೈತರು ಅನುಸರಿಸಬೇಕಾದ ಕ್ರಮಗಳೇನು; ಇದುವರೆಗೆ ರಾಜ್ಯದಲ್ಲಿ ಎಷ್ಟು ರೈತರಿಗೆ ಹಣ ಬಿಡುಗಡೆ ಮಾಡಲಾಗಿದೆಯೇ? (ಸಂಪೂರ್ಣ ವಿವರ ನೀಡುವುದು)	FRUITS ಪೋರ್ಟಲ್‌ನಲ್ಲಿ ನೋಂದಣಿಗೊಂಡ ರಾಜ್ಯದ ಎಲ್ಲಾ ರೈತರಿಗೆ "ರೈತ ಶಕ್ತಿ" ಯೋಜನೆಯನ್ನು ಕೆ-ಕಿಸಾನ್ ತಂತ್ರಾಂಶ ಬಳಸಿಕೊಂಡು ನೇರ ನಗದು ವರ್ಗಾವಣೆ (DBT) ಮೂಲಕ ಕಾರ್ಯಕ್ರಮ ಅನುಷ್ಠಾನ ಮಾಡಲಾಗುವುದು. FRUITS ಪೋರ್ಟಲ್‌ನಲ್ಲಿ ನೋಂದಣಿಗೊಂಡ ರಾಜ್ಯದ ಎಲ್ಲಾ ರೈತರು ಈ ಯೋಜನೆಯ ಫಲಾನುಭವಿಗಳಾಗಿರುತ್ತಾರೆ ಹಾಗೂ ಈ ಯೋಜನೆಯು ಅರ್ಹತಾಧಾರಿತ ಯೋಜನೆಯಾಗಿರುವುದರಿಂದ ಯಾವುದೇ ರೈತರು ಪ್ರತ್ಯೇಕವಾಗಿ ವೈಯಕ್ತಿಕ ಅರ್ಜಿ ಸಲ್ಲಿಸುವ ಅವಶ್ಯಕತೆಯಿರುವುದಿಲ್ಲ. ದಾಖಲೆಗಳ ಪರಿಶೀಲನೆಯನ್ನು FRUITS ಪೋರ್ಟಲ್ ನಲ್ಲಿ ಲಭ್ಯವಿರುವ ದತ್ತಾಂಶಗಳ ಆಧಾರದ ಮೇಲೆ ಮಾಡಲಾಗುವುದು.

		ಈ ಯೋಜನೆಯ ಅನುಷ್ಠಾನಕ್ಕಾಗಿ ಪ್ರಸಕ್ತ ಸಾಲಿನಲ್ಲಿ ರೂ.40,000/- ಲಕ್ಷ ಅನುದಾನವನ್ನು ಒದಗಿಸಲಾಗಿರುತ್ತದೆ. ಹಾಗೂ ಮೊದಲನೆ ತ್ರೈಮಾಸಿಕ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಕಾರ್ಯಕ್ರಮ ಲೋಕಾರ್ಪಣೆಯಾದ ನಂತರ ರೈತರಿಗೆ DBT ಮೂಲಕ ಹಣ ವರ್ಗಾವಣೆ ಮಾಡಲಾಗುವುದು.

ಸಂಖ್ಯೆ: AGRI-AML/224/2022

(ಬಿ.ಸಿ. ಪಾಟೀಲ್)
ಕೃಷಿ ಸಚಿವರು